## ಕರ್ನಾಟಕ ಸರ್ಕಾರದ ನಡವಳಿಗಳು.

ವಿಷಯ:- ಶ್ರೀ ವೇಣುಗೋಪಾಲ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಭಾಲ್ಕಿ, ಬೀದರ್ ಜಿಲ್ಲೆ ಮತ್ತು ಶ್ರೀ ಮೋಹನ್ ಅಷ್ಟಿಪುತ್ರ, ಲೆಕ್ಕಾಧೀಕ್ಷಕರು, ತಾಲ್ಲೂಕು ಪಂಚಾಯಿತಿ, ಭಾಲ್ಕಿ, ಬೀದರ್ ಜಿಲ್ಲೆ, ಇವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ: 1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್ ರವರ ಪತ್ರ ಸಂಖ್ಯೆ: ಜಿಪಂಬಿ/ಅಭಿವೃದ್ಧಿ/ವಸತಿ/ಸಿಆರ್-07/2010-11 ದಿನಾಂಕ: 29-009-2014.

2. ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 59 ವಿಸೇಬಿ 2010 ದಿನಾಂಕ 10-02-2015.

3. ಶ್ರೀ ವೇಣುಗೋಪಾಲ್ ಮತ್ತು ಶ್ರೀ ಮೋಹನ್ ಅಷ್ಟಿಪುತ್ರ, ಇವರುಗಳ ಲಿಖಿತ ಹೇಳಿಕೆ ದಿನಾಂಕ:23-03-2015.

----

ಪ್ರಸ್ತಾವನೆ:-

ಬೀದರ್ ಜಿಲ್ಲೆ, ಭಾಲ್ಕಿ ತಾಲ್ಲೂಕು ಪಂಚಾಯುತಿಯಲ್ಲಿ 2002-03 ಮತ್ತು 2003-04 ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಗಳಲ್ಲಿ ಯೋಜನೆಯ ನಿಯಮಗಳನ್ನು ಉಲ್ಲಂಘಿಸಿ ಸರ್ಕಾರದ ಹಣ ಮತ್ತು ಅಧಿಕಾರವನ್ನು ದುರುಪಯೋಗಪಡಿಸಿಕೊಂಡು ಕರ್ತವ್ಯಲೋಪವೆಸಗಿರುವ ಶ್ರೀ ವೇಣುಗೋಪಾಲ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಭಾಲ್ಕಿ ಮತ್ತು ಶ್ರೀ ಮೋಹನ ಅಷ್ಟಿಪುತ್ರ ಹಿಂದಿನ ಲೆಕ್ಕ ಅಧೀಕ್ಷಕರು, ತಾಲ್ಲೂಕು ಪಂಚಾಯುತಿ, ಭಾಲ್ಕಿ ಇವರುಗಳು ಶಿಸ್ತು ಕ್ರಮ ಜರುಗಿಸಲು ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ 29-009-2014 ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್ ರವರು ದೋಷಾರೋಪಣಾ ಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಪ್ರಕರಣದಲ್ಲಿ ಭಾಗಿಯಾಗಿರುವರೆನ್ನಲಾದ ಶ್ರೀ ವೇಣುಗೋಪಾಲ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಭಾಲ್ಕಿ ಮತ್ತು ಶ್ರೀ ಮೋಹನ ಅಷ್ಟಿಪುತ್ರ ಹಿಂದಿನ ಲೆಕ್ಕ ಅಧೀಕ್ಷಕರು, ತಾಲ್ಲೂಕು ಪಂಚಾಯತಿ, ಭಾಲ್ಕಿ ಇವರುಗಳು ಎಸಗಿರುವ ಕರ್ತವ್ಯಲೋಪಗಳ/ದುರ್ನಡತೆಗಳ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರಡಿ ಶಿಸ್ತು ಕ್ರಮ ಜರುಗಿಸಲು ಉದ್ದೇಶಿಸಿ, ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಜಾರಿ ಮಾಡಲಾಗಿತ್ತು. ಸದರಿ ನೋಟೀಸಿಗೆ ಆಪಾದಿತ ಅಧಿಕಾರಿ/ನೌಕರರು ಮೇಲೆ ಓದಲಾದ ಕ್ರಮಸಂಖ್ಯೆ (3) ರಲ್ಲಿ ಲಿಖಿತ ಹೇಳಿಕೆಗಳನ್ನು ಸಲ್ಲಿಸಿ, ತಮ್ಮ ವಿರುದ್ಧ ಮಾಡಿರುವ ಎಲ್ಲಾ ಆರೋಪಗಳು ಸತ್ಯಕ್ಕೆ ದೂರವಾಗಿದ್ದು, ಪ್ರಕರಣವನ್ನು ಇದೇ ಹಂತದಲ್ಲಿ ಕೈಬಿಡಲು ಕೋರಿರುತ್ತಾರೆ. ಸದರಿ ಆಪಾದಿತ ಅಧಿಕಾರಿ/ನೌಕರರು ಸಲ್ಲಿಸಿರುವ ಲಿಖಿತ ಹೇಳಿಕೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದ್ದು, ಅವರುಗಳು ಸಲ್ಲಿಸಿರುವ ವಿವರಣೆಗಳು ಸಮರ್ಥನೀಯ ವಾಗಿರುವುದಿಲ್ಲವಾದ್ದರಿಂದ ಸದರಿ ಅಧಿಕಾರಿ/ನೌಕರರ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರವು ನಿರ್ಧರಿಸಿ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 59 ವಿಸೇಬಿ 2010 ಬೆಂಗಳೂರು, ದಿನಾಂಕ:10-12-2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ವೇಣುಗೋಪಾಲ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಭಾಲ್ಕಿ ಮತ್ತು ಶ್ರೀ ಮೋಹನ ಅಷ್ಟಿಪುತ್ರ,

ಹಿಂದಿನ ಲೆಕ್ಕ ಅಧೀಕ್ಷಕರು, ತಾಲ್ಲೂಕು ಪಂಚಾಯತಿ, ಭಾಲ್ಕಿ, ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಗಳು 1957 ರ ನಿಯಮ 11 ರ ಅನುಸಾರ ಮತ್ತು ಸದರಿ ನಿಯಮಗಳ ನಿಯಮ 13 ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಗಳು 1957 ರ ನಿಯಮ 11 ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು; ಅದೇ ನಿಯಮಾವಳಗಳ ನಿಯಮ 11(2) ರ ಪ್ರಕಾರ ಶ್ರೀ ಎ.ಎ. ಹುಲಗೇರಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಗಳು 1957 ರ ನಿಯಮ 11(5)(ಸಿ) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತಿ, ಬೀದರ್ ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಿ ಪ್ರತಿಯೊಬ್ಬ ಆಪಾದಿತರ ಪ್ರತಿಯೊಂದು ಆರೋಪವು ಸಾಬೀತಾಗಿರುವ ಅಥವಾ ಸಾಬೀತಾಗಿಲ್ಲದಿರುವ ಬಗ್ಗೆ ತಮ್ಮ ಸ್ಪಷ್ಟ ಅಭಿಪ್ರಾಯದೊಂದಿಗೆ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಧಾರವಾಡ ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/45/ಸೇಇವಿ/2014 ದಿನಾಂಕ: 08-01-2015 ರನ್ವಯ ವಾಹನ ಭತ್ಯೆಯೂ ಸೇರಿದಂತೆ ರೂ. 15,000/-ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ವಿ. ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇ-ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್ / ಧಾರವಾಡ.
4. ಶ್ರೀ ಎ.ಎ.ಹುಲಗೇರಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಹೀಂ ಮಂಜಿಲ್, 2ನೇ ಮುಖ್ಯ ರಸ್ತೆ, 8ನೇ ಕ್ರಾಸ್, ಶಿವಗಿರಿ, ಧಾರವಾಡ-580001
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ,(ಆ) -ವಿಧಾನಸೌಧ ಬೆಂಗಳೂರು
6. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಬೀದರ್ (ಮಂಡನಾಧಿಕಾರಿ).
7. ಸಂಬಂಧಿಸಿದ ಅಧಿಕಾರಿ/ನೌಕರರಿಗೆ. (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್ ಇವರ ಮುಖಾಂತರ.)

<u>ಪ್ರತಿಯನ್ನು:</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) / ಉಪ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳಿಗೆ
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.

GO